Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.06.2025 2.30 hrs

<><*<><>*><>

ಮುಖ್ಯಾಂಶಗಳು

- ಅನುದಾನ ವಿಷಯದಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನ್ಯಾಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ
- ಕಾಲ್ತುಳಿತ ಘಟನೆಯ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹ
- ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ಪ್ರಕರಣ : ಗಾಯಗೊಂಡ ೪೫ ಜನರಿಗೆ ಬೆಂಗಳೂರು ನಗರ ಉಪ ಆಯುಕ್ತರಿಂದ ನೋಟಿಸ್
- ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ : ಕೃಷಿ ಕುರಿತು ವಿಜ್ಞಾನಿಗಳಿಂದ ರೈತರಿಗೆ ಮಾಹಿತಿ

***************************

ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ರಾಜ್ಯಕ್ಕೆ ೫ ಸಾವಿರದ ೩೦೦ ಕೋಟಿ ರೂಪಾಯಿ ಅನುದಾನ ನೀಡುತ್ತೇನೆ ಎಂದು ಹೇಳಿದ್ದರು. ಆದರೆ ಯಾವುದೇ ಹಣ ನೀಡಲಿಲ್ಲ. ಈ ಮೂಲಕ ಕೇಂದ್ರ ಸರ್ಕಾರವು ರಾಜ್ಯಕ್ಕೆ ಅನ್ಯಾಯ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಮೈಸೂರಿನ ತಮ್ಮ ನಿವಾಸದಲ್ಲಿ ಇಂದು ಮಾತನಾಡಿದ ಅವರು, ಅನುದಾನದ ಬಗ್ಗೆ ರಾಜ್ಯ ಬಿಜೆಪಿ ನಾಯಕರು ಏಕೆ ಪ್ರಶ್ನೆ ಮಾಡುತ್ತಿಲ್ಲ. ಇದರಿಂದಾಗಿ ರಾಜ್ಯಕ್ಕೆ ಅನ್ಯಾಯವಾಗುತ್ತಿದೆ ಎಂದು ದೂರಿದರು. ರಾಜ್ಯದಲ್ಲಿ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳನ್ನು ದೇಶದ ವಿವಿಧ ರಾಜ್ಯಗಳಲ್ಲೂ ನಕಲು ಮಾಡಲಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದಾಗ ಜಾರಿಗೆ ತಂದಿದ್ದ ಗ್ಯಾರಂಟಿ ಯೋಜನೆಗಳ ಬಗ್ಗೆ ವಿರೋಧ ಪಕ್ಷಗಳು ಟೀಕಿಸುತ್ತಿದ್ದವು. ಆದರೆ ಕ್ರಮೇಣ ಈ ಗ್ಯಾರಂಟಿ ಯೋಜನೆಗಳನ್ನು ಮಧ್ಯಪ್ರದೇಶ, ದೆಹಲಿ, ಉತ್ತರ ಪ್ರದೇಶ ರಾಜ್ಯಗಳಲ್ಲೂ ಬಳಸಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

***************************

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಹುಬ್ಬಳ್ಳಿಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆಗ್ರಹಿಸಿದ್ದಾರೆ. ಹುಬ್ಬಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಘಟನೆಗೆ ಸಂಬಂಧಿಸಿದಂತೆ ಮೊದಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡಬೇಕು. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿದ್ದ ಗೋವಿಂದ ರಾಜ್ ಅವರನ್ನು ಮಾತ್ರ ಹುದ್ದೆಯಿಂದ ಬಿಡುಗಡೆ ಮಾಡಿದ್ದಾರೆ ಎಂದರು. ಸಿದ್ದರಾಮಯ್ಯನವರ ಸರ್ಕಾರದಲ್ಲಿ ಬೇಕಾದವರಿಗೆ ಬೆಣ್ಣೆ. ಬೇಡವಾದವರಿಗೆ ಸುಣ್ಣ ಎಂಬಂತೆ ನಡೆದುಕೊಳ್ಳುತ್ತಿದ್ದಾರೆ. ಪೊಲೀಸ್ ಆಯುಕ್ತರು ಕಾರ್ಯಕ್ರಮ ಬೇಡ ಎಂದರೂ ಏಕೆ ಮಾಡಿದರೂ ಎಂಬುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಬೇಕು ಎಂದು ಸಚಿವ ಪ್ರಹ್ಲಾದ ಜೋಶಿ ಆಗ್ರಹಿಸಿದರು.

***************************

ಇದೇ ೪ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಭೀಕರ ಕಾಲ್ತುಳಿತ ಘಟನೆಯಲ್ಲಿ ೧೧ ಜನ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಗಾಯಗೊಂಡ ೪೫ ಜನರಿಗೆ ಬೆಂಗಳೂರು ನಗರ ಉಪ ಆಯುಕ್ತ ಜಿ.ಜಗದೀಶ್ ನೋಟಿಸ್ ಜಾರಿ ಮಾಡಿದ್ದಾರೆ. ನೋಟಿಸ್ ಜಾರಿಗೊಳಿಸಲಾದ ೪೫ ಮಂದಿಗೆ ಇದೇ ೧೧ರೊಳಗೆ ತಮ್ಮ ಹೇಳಿಕೆಗಳನ್ನು ದಾಖಲಿಸುವಂತೆ ನಿರ್ದೇಶಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೆಜಿಸ್ಟ್ರಿಯಲ್ ತನಿಖೆ ನಡೆಸಲು ಸೂಚಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ೧೫ ದಿನಗಳೊಳಗಾಗಿ ವರದಿ ಸಲ್ಲಿಸುವಂತೆ ಉಪ ಆಯುಕ್ತ ಜಿ.ಜಗದೀಶ್ ಅವರಿಗೆ ನಿರ್ದೇಶಿಸಿದ್ದಾರೆ. ಗಾಯಾಳುಗಳು ಹೇಳಿಕೆಗಳು ದಾಖಲಾಗುತ್ತಿದ್ದಂತೆ ಉಪ ಆಯುಕ್ತರು ಮೃತಪಟ್ಟವರ ಕುಟುಂಬಸ್ಥರು ಹಾಗೂ ಪ್ರತ್ಯಕ್ಷದರ್ಶಿಗಳ ಹೇಳಿಕೆಗಳನ್ನು ಇದೇ ೧೩ರಂದು ದಾಖಲಿಸಿಕೊಳ್ಳಲಿದ್ದಾರೆ. ಘಟನೆ ನಡೆದ ದಿನದಂದು ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಿಯೋಜಿಸಲಾಗಿದ್ದ ಪೊಲೀಸ್ ಸಿಬ್ಬಂದಿ ಕುರಿತಂತೆ ಮಾಹಿತಿ ನೀಡಲು ಕೋರಿ, ಬೆಂಗಳೂರು ಪೊಲೀಸ್ ಆಯುಕ್ತರ ಕಚೇರಿಗೆ ಪತ್ರ ಬರೆಯಲಾಗಿದೆ.

****************************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇತ್ತೀಚಿಗೆ ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ನಡೆದ ಕಾಲ್ತುಳಿತದಲ್ಲಿ ಮೃತಪಟ್ಟ ಕೆಜಿಎಫ್ ತಾಲೂಕಿನ ಬಡಮಾಕನಹಳ್ಳಿಯ ಎಂಜಿನಿಯರಿಂಗ್ ಯುವತಿ ಸಹನಾ ಅವರ ಪೋಷಕರಿಗೆ ಸರ್ಕಾರದ ವತಿಯಿಂದ ೨೫ ಲಕ್ಷ ರೂಪಾಯಿ ಮೊತ್ತದ ಪರಿಹಾರ ಚೆಕ್ ಅನ್ನು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ವಿತರಿಸಿ, ಕುಟುಂಬಕ್ಕೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಅಪರ ಜಿಲ್ಲಾಧಿಕಾರಿ ಮಂಗಳ, ಕೋಲಾರ ತಹಸೀಲ್ದಾರ್ ಡಾ.ನಯನ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಇನ್ನೊಂದೆಡೆ, ಕಾಲ್ತುಳಿತದಲ್ಲಿ ಮೃತಪಟ್ಟ ಕುಣಿಗಲ್ ಮೂಲದ ಯುವಕ ಮನೋಜ್ ತಂದೆಗೆ ಇಂದು ತುಮಕೂರು ಜಿಲ್ಲಾಡಳಿತದಿಂದ ೨೫ ಲಕ್ಷ ರೂಪಾಯಿಗಳ ಚೆಕ್ ವಿತರಿಸಲಾಯಿತು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸರ್ಕಾರದ ಸೂಚನೆ ಮೇರೆಗೆ ಜಿಲ್ಲಾಧಿಕಾರಿ ಶುಭಕಲ್ಯಾಣ್ ಪರಿಹಾರದ ಚೆಕ್ ಅನ್ನು ಮೃತ ಮನೋಜ್ ತಂದೆ ದೇವರಾಜು ಅವರಿಗೆ ವಿತರಿಸಿದರು. ಕುಣಿಗಲ್ ತಾಲೂಕಿನ ನಾಗಸಂದ್ರ ಗ್ರಾಮದ ಮನೋಜ್, ತಂದೆ-ತಾಯಿ ಜೊತೆಗೆ ಬೆಂಗಳೂರಿನಲ್ಲಿ ವಾಸವಿದ್ದ. RCB ಸಂಭ್ರಮಾಚರಣೆ ನೋಡಲು ಸ್ನೇಹಿತರೊಂದಿಗೆ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ತೆರಳಿದ್ದ ವೇಳೆ ನೂಕು ನುಗ್ಗಲು ಉಂಟಾಗಿ ಕಾಲ್ತುಳಿತಕ್ಕೆ ಸಿಲುಕಿ ಮನೋಜ್ ಮೃತಪ ಟ್ಟಿದ್ದರು.

****************************

ಜಾಗತಿಕ ಕಲ್ಯಾಣ, ವಿಶ್ವ ಶಾಂತಿ ಮತ್ತು ಆಧ್ಯಾತ್ಮಿಕ ಅನುಭೂತಿಗಾಗಿ, ಇಡೀ ವಿಶ್ವವೇ ಇಂದು, ಭಾರತದತ್ತ ನೋಡುತ್ತಿದೆ ಎಂದು ರಾಜ್ಯಪಾಲ ಥಾವರಚಂದ ಗೆಹಲೋಟ್ ಹೇಳಿದ್ದಾರೆ. ಬೆಳಗಾವಿ ಜಿಲ್ಲೆ ಕಾಗವಾಡ ತಾಲೂಕು ಐನಾಪುರದಲ್ಲಿ, 'ಅಖಿಲ ಭಾರತ ಭಟ್ಟಾರಕ ಸಮ್ಮೇಳನ ಹಾಗೂ ಜೈನ ಸಮಾವೇಶ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಗವಾನ್ ಮಹಾವೀರರ ಜೀವನ ತತ್ವ ಮತ್ತು ಬೋಧನೆಗಳನ್ನು ಅಳವಡಿಸಿಕೊಂಡು, ಸತ್ಸಂಗದ ಮೂಲಕ, ಶಾಂತಿ, ಸಾಮರಸ್ಯ, ಸಹಾನುಭೂತಿಯ ವಾತಾವರಣ ನಿರ್ಮಿಸುವಂತಾಗಬೇಕು ಎಂದರು. ಸಮಾವೇಶದಲ್ಲಿ ಆಚಾರ್ಯ ಶ್ರೀ ಗುಣಧರ ನಂದಿ ಮಹಾರಾಜರು ಉಪಸ್ಥಿತರಿದ್ದರು.

****************************

ಕೃಷಿ ಇಲಾಖೆ ಮತ್ತು ಕೃಷಿ ವಿಜ್ಞಾನ ಕೇಂದ್ರದ ತಜ್ಞರು ನೀಡುವ ಸಲಹೆ-ಸೂಚನೆಗಳನ್ನು ರೈತರು ಪಾಲಿಸಿದರೆ, ಉತ್ತಮ ಇಳುವರಿ ಪಡೆಯಲು ಸಾಧ್ಯ ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಕೀಟ

ಶಾಸ್ತ್ರಜ್ಞ ಡಾ. ಅವಿನಾಶ್ ಹೇಳಿದ್ದಾರೆ. ದಾವಣಗೆರೆ ತಾಲೂಕಿನ ಸಿದ್ದನೂರು ಗ್ರಾಮದಲ್ಲಿಂದು ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಬೆಳೆಗಳಲ್ಲಿ ಕೀಟ ನಿಯಂತ್ರಣ ಕುರಿತು ಮಾತನಾಡಿದ ಅವರು, ವಿಷಯುಕ್ತ ಕೀಟನಾಶಕಗಳು ಹಾಗೂ ರಸಗೊಬ್ಬರಗಳನ್ನು ಬಳಸದೇ, ಸಾವಯವ ಹಾಗೂ ನೈಸರ್ಗಿಕ ಕೃಷಿ ಪದ್ಧತಿಗೆ ಗಮನ ನೀಡಬೇಕು ಎಂದು ತಿಳಿಸಿದರು. ಪ್ರಸ್ತುತ ಕೃಷಿ ಕ್ಷೇತ್ರವು ಹಲವಾರು ಬದಲಾವಣೆ ಕಾಣುತ್ತಿದ್ದು, ಹವಾಮಾನ ವೈಪರೀತ್ಯ ಪೋಷಕಾಂಶ ನಿರ್ವಹಣೆ ಹಾಗೂ ರೋಗ ಮತ್ತು ಕೀಟ ನಿರ್ವಹಣೆಗಳ ಸಮಸ್ಯೆಗಳನ್ನು ಎದುರಿಸುತ್ತಿದೆ. ಈ ಎಲ್ಲಾ ಸಮಸ್ಯೆಗಳನ್ನು ವಿಜ್ಞಾನಿಗಳು ಹಾಗೂ ಕೃಷಿ ಅಧಿಕಾರಿಗಳು ರೈತರೊಂದಿಗೆ ಸಂವಾದದ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳುವ ನಿಟ್ಟಿನಲ್ಲಿ ಈ ಅಭಿಯಾನ ಸಹಕಾರಿಯಾಗಲಿದೆ ಎಂದು ಡಾ. ಅವಿನಾಶ್ ಹೇಳಿದರು. ಕಾರ್ಯಕ್ರಮದಲ್ಲಿ ಕೀಟ ನಿಯಂತ್ರಣದಲ್ಲಿ ಮೋಹಕ ಬಲೆಗಳ ಉಪಯೋಗ ಹಾಗೂ ಬೀಜೋಪಚಾರದ ಪ್ರಾತ್ಯಕ್ಷಿಕೆ ಮಾಡಿ ತೋರಿಸಲಾಯಿತು. ಇದೇ ರೀತಿ ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯುತ್ತಿದ್ದು, ಕೃಷಿಗೆ ಸಂಬಂಧಿಸಿದಂತೆ ವಿಜ್ಞಾನಿಗಳು ರೈತರಿಗೆ ಮಾಹಿತಿ ನೀಡುತ್ತಿದ್ದಾರೆ.

ಧ್ವನಿ : ಡಾ.ಅವಿನಾಶ್, ಕೀಟ ಶಾಸ್ತ್ರಜ್ಞ (26 ಸೆಕೆಂಡ್ಸ್)

****************************

ಪರಿಶಿಷ್ಟ ಜಾತಿ ಗಣತಿಯಲ್ಲಿ , ಇದುವರೆಗೆ ಭಾಗವಹಿಸದೇ ಇರುವ, ಪರಿಶಿಷ್ಟ ಸಮುದಾಯದವರು, ಈ ತಿಂಗಳ ೨೨ ರವರೆಗೆ, ರಾಜ್ಯದ ೯ ಸಾವಿರದ ೪೦೦ ನಾಗರಿಕ ಸೇವಾ ಕೇಂದ್ರಗಳಾದ, ಕರ್ನಾಟಕ ಒನ್ ನಲ್ಲಿ, ತಮ್ಮ ಮಾಹಿತಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ಏಕ ಸದಸ್ಯ ಆಯೋಗದ ನಿರ್ದೇಶನದಂತೆ, ಆಧಾರ್ ಕಾರ್ಡ್ ಅಥವಾ ಪಡಿತರ ಚೀಟಿ ಬಳಸಿ, ಮಾಹಿತಿ ದಾಖಲಿಸಬಹುದು.

****************************

ಖಾಸಗಿ ಬಸ್ ಮತ್ತು ದ್ವಿಚಕ್ರ ವಾಹನದ ನಡುವೆ ಅಪಘಾತ ಸಂಭವಿಸಿದ ಪರಿಣಾಮ ದ್ವಿಚಕ್ರ ವಾಹನದಲ್ಲಿದ್ದ ದಂಪತಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲೂಕಿನ ಮುರುಗಮಲ್ಲಾ ರಸ್ತೆಯ ಕಾಗತಿ ಬಳಿ ಇಂದು ಬೆಳಗ್ಗೆ ನಡೆದಿದೆ. ಮೃತರನ್ನು ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ವೈ.ಹುಣಸೇನಹಳ್ಳಿ ಗ್ರಾಮದ ಚಂದ್ರಪ್ಪ ಮತ್ತು ಬೇಬಮ್ಮ ಎಂದು ಗುರುತಿಸಲಾಗಿದ್ದು, ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

****************************

ಹಾವೇರಿ ಜಿಲ್ಲೆಯಲ್ಲಿರುವ ಅನಕ್ಷರಸ್ಥರನ್ನು ಅಕ್ಷರಸ್ಥರನ್ನಾಗಿ ಮಾಡಲು ನಿರಂತರವಾಗಿ ಪ್ರಯತ್ನಿಸಲಾಗುತ್ತಿದ್ದು, ಸಾಕ್ಷರತಾ ಕಾರ್ಯಕ್ರಮದಡಿ ಜಿಲ್ಲೆಯ ೨೮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ೪೪೧ ಕಲಿಕಾ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಬಿ.ಎಂ.ಬೇವಿನಮರದ ಮಾಹಿತಿ ನೀಡಿದ್ದಾರೆ. ಈ ಕಲಿಕಾ ಕೇಂದ್ರಗಳಲ್ಲಿ ಪಾಠಗಳು ನಡೆಸಲಾಗುತ್ತಿದೆ. ಕಲಿಕಾರ್ಥಿಗಳು ಕಲಿಕಾ ಕೇಂದ್ರಗಳಿಗೆ ಆಗಮಿಸಿ, ಅಕ್ಷರ ಕಲಿತರೆ, ಅವರ ಜೀವನದಲ್ಲಿ ಅಮೂಲ್ಯವಾದ ಬದಲಾವಣೆ ಕಾಣಲು ಸಾಧ್ಯವಿದೆ ಎಂದರು. ಕಾರ್ಯಕ್ರಮದಡಿ ಕೆಲಸ ಮಾಡುತ್ತಿರುವ ಬೋಧಕರು, ಅನಕ್ಷರಸ್ಥರನ್ನು ಕಲಿಕಾ ಕೇಂದ್ರಗಳಿಗೆ ಆಗಮಿಸುವಂತೆ ಮಾಡಿ, ಕಲಿಕೆಗೆ ಪ್ರೋತ್ಸಾಹ ನೀಡಬೇಕು. ಪ್ರತಿ ಅನಕ್ಷರಸ್ಥ ಕಲಿಕಾರ್ಥಿಗೆ ಬಾಳಿಗೆ ಬೆಳಕು, ಸವಿಬರಹ ಪುಸ್ತಕಗಳನ್ನು ನೀಡಲಾಗಿದೆ. ಕಲಿಕಾ

ಸಾಮಗ್ರಿಗಳನ್ನು ಬಳಸಿಕೊಂಡು ಕಲಿಕಾರ್ಥಿಗಳಿಗೆ ಶಿಕ್ಷಣ ನೀಡಿ ಅವರ ಜ್ಞಾನದ ಮಟ್ಟ ಹೆಚ್ಚುವಂತೆ ಪ್ರಯತ್ನಿಸಲಾಗುತ್ತಿದೆ ಎಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ತಿಳಿಸಿದರು.

---

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

ನಮ್ಮ ಮುಂದಿನ ವಾರ್ತಾ ಪ್ರಸಾರ, ಸಂಜೆ 6 ಗಂಟೆ 40 ನಿಮಿಷಕ್ಕೆ.

<><><>